ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಕರಾವಳಿ ಭಾಗದಲ್ಲಿ ರಸ್ತೆ ದುರಸ್ಥಿ ಕುರಿತು

ಶ್ರೀ ಕೆ. ಪ್ರತಾಪ್‌ಸಿಂಹ ನಾಯಕ್(ವಿಧಾನಸಭೆಯಿಂದ ಚುನಾಯಿತರಾದವರು) -

1079 (1164) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದ ಕರಾವಳಿ ಭಾಗದಲ್ಲಿ ಮಳೆಗಾಲದಲ್ಲಿ ಸುರಿಯುವ ಮಳೆಯಿಂದಾಗಿ ಇಲ್ಲಿನ ಲೋಕೋಪಯೋಗಿ ಇಲಾಖೆ ವ್ಯಾಪ್ತಿಯ ರಸ್ತೆಗಳು ಕೆಟ್ಟು ಹೋಗುತ್ತಿರುವುದು ಮತ್ತು ಆ ರಸ್ತೆಗಳು ಮತ್ತೆ ಮತ್ತೆ ದುರಸ್ಥಿ ಮಾಡಬೇಕಾದ ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕರಾವಳಿ ರಸ್ತೆಗಳನ್ನು ಸಮರ್ಪಕವಾಗಿ ನಿರ್ಮಾಣ ಮಾಡಿ ವಿಪರೀತ ಮಳೆಯಿಂದಾಗಿ ಪದೇ ಪದೇ ದುರಸ್ಥಿ ತಡೆಯಲು ರಸ್ತೆ ನಿರ್ಮಾಣದ ಸಮಯದಲ್ಲಿ ಕರಾವಳಿ ರಸ್ತೆಗಳಿಗಾಗಿ ವಿಶೇಷ ಮಾನದಂಡಗಳನ್ನು ರಚಿಸುವ ಕುರಿತು ಸರ್ಕಾರದ ಮುಂದಿರುವ ಸಲಹೆಗಳೇನು?